## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ರಾಮಪ್ಪ ಹಿತ್ತಲಮನಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, 43 ನೇ ಬೆಳ್ಳೆ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ, (ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಿಯಾರು ಗ್ರಾಮ ಪಂಚಾಯಿತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ) ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಇವರುಗಳ ವಿರುದ್ಧ ಲೋಕಾಯುಕ್ತ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಎಂವೈಎಸ್-4385/2014/ಪಿ.ಪಿ ದಿನಾಂಕ:21.06.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3)ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 06-05-2017 ರ ವರದಿಯಲ್ಲಿ ದೂರುದಾರರಾದ ಶ್ರೀ ಹೆರಾಲ್ಡ್ ಡಿಸೋಜ ಇವರು ಈ ಸಂಸ್ಥೆಗೆ ದೂರೊಂದನ್ನು ಸಲ್ಲಿಸಿ ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ಮೂಡಬೆಳ್ಳೆ ಗ್ರಾಮವು ಪಟ್ಟಣವಾಗಿ ಬೆಳೆಯುತ್ತಿದ್ದು, ವಾಹನ ಸಂಚಾರವು ಹೆಚ್ಚಾಗಿರುತ್ತದೆ. ಪಟ್ಟಣದಮುಖ್ಯ ರಸ್ತೆಯು ಮೂಡಬೆಳ್ಳೆಯಿಂದ ಉಡುಪಿಗೆ ಹೋಗುವ ರಸ್ತೆಯಾಗಿದ್ದು, ಇದು ರಾಜ್ಯದ ಹೆದ್ದಾರಿಯಾಗಿರುತ್ತದೆ. ಈ ಹೆದಾರಿಯ ಇಕ್ಕೆಲುಗಳಲ್ಲಿ ಅನೇಕ ಮನೆಗಳನ್ನು ಕಟ್ಟಲಾಗಿರುತ್ತದೆ. ಅದೇ ರೀತಿ ಸೇಂಟ್ ಲಾರೆನ್ಸ್ ಚರ್ಚ್‌ನ ಪಾದರಿಯವರು ಸರ್ವೆ ನಂಬರ್ 200/1ಬಿಪಿ1 ಹಾಗೂ ಸರ್ವೆ ನಂ. 170/1 ಎಪಿ1 ರಲ್ಲಿ ಅಂಗಡಿಗಳನ್ನು ಹಾಗೂ ವಾಣಿಜ್ಯ ಸಂಕೀರ್ಣಗಳನ್ನು ಕಟ್ಟಿ ಬಾಡಿಗೆ ಪಡೆಯಲು ಕ್ರಮ ಜರುಗಿಸಿರುತ್ತಾರೆ. ಈಗ ಸದರಿ ಕಟ್ಟಡದ ಕಾಮಗಾರಿ ನಡೆಯುತ್ತಿದ್ದು, ಸದರಿ ಕಟ್ಟಡ ನಿರ್ಮಾಣವು ರಾಜ್ಯ ಹೆದ್ದಾರಿ ನಿಯಮಗಳನ್ನು ಉಲ್ಲಂಘಿಸಿ ಕಟ್ಟಲಾಗುತ್ತಿರುತ್ತದೆ. ಸರಿಯಾಗಿ ರಸ್ತೆ ಮಾರ್ಜಿನ್ ಬಿಟ್ಟಿರುವುದಿಲ್ಲ. ಈ ಬಗ್ಗೆ ಎದುರುದಾರರಿಗೆ ಅನೇಕ ಬಾರಿ ಮನವಿಗಳನ್ನು ನೀಡಿದ್ದರೂ, ಎದುರುದಾರರಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಉಡುಪಿ ತಾಲ್ಲೂಕಿನ ತಹಶೀಲ್ದಾರ್ ಹಾಗೂ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಯಾವುದೇ ಕ್ರಮ ಜರುಗಿಸಿರುವುದಿಲ್ಲ. ಆದ್ದರಿಂದ, ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ. ಎಂದು ತಿಳಿಸಿರುತ್ತಾರೆ

ಸದರಿ ದೂರಿನ ಆಧಾರದ ಮೇಲೆ ಎದುರುದಾರರುಗಳ ಆಕ್ಷೇಪಣೆಯನ್ನು ಕರೆಯಲಾಗಿದ್ದು, ಎದುರುದಾರರು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರು ಮಾಡಿರುವ ಆರೋಪವು ಸುಳ್ಳಿನಿಂದ ಕೂಡಿರುತ್ತದೆ ಎಂದು ತಾನು ಮೂಡುಬೆಳ್ಳೆ ಚರ್ಚಿನ ಪಾದ್ರಿಯವರೊಂದಿಗೆ ಯಾವುದೇ ರೀತಿ ಶಾಮೀಲಾಗಿ ಅಕ್ರಮ ಕಟ್ಟಡ ಕಟ್ಟಲಿಕ್ಕೆ ಅನುವು ಮಾಡಿಕೊಟ್ಟಿರುವುದಿಲ್ಲ. ಪಂಚಾಯತ್‌ರಾಜ್ ಕಾಯ್ದೆ ಅಡಿಯಲ್ಲಿ ಕಟ್ಟಡ ನಿರ್ಮಾಣ ಪರವಾನಗೆಯನ್ನು ನೀಡಿರುವುದನ್ನು ಹೊರತುಪಡಿಸಿ ಯಾವುದೇ ವೈಯಕ್ತಿಕ ನಿರ್ಧಾರ ಅಥವಾ ನಿರ್ಣಯವನ್ನು ಕೈಗೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಎದುರುದಾರರ ಆಕ್ಷೇಪಣೆ ಮೇರೆಗೆ ದೂರುದಾರರ ಪ್ರತ್ಯುತ್ತರವನ್ನು ಕರೆಯಲಾಗಿದ್ದು, ದೂರುದಾರರು ಚರ್ಚನವರಿಗೆ ಕಟ್ಟಡ ನಿರ್ಮಾಣ ಮಾಡಲು ಲೈಸನ್ಸ್ ಅನ್ನು ನೀಡಿದ್ದು, ಅದು ಅಕ್ರಮವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಈ ಸಂದರ್ಭದಲ್ಲಿ ಪ್ರಕರಣದ ತನಿಖೆಯನ್ನು ಈ ಸಂಸ್ಥೆಯ ಉಡುಪಿಯ ಆರಕ್ಷಕ ಉಪಾಧೀಕ್ಷಕರಿಗೆ ವಹಿಸಲಾಗಿದ್ದು, ಸದರಿಯವರು ತನಿಖೆಯನ್ನು ನಿರ್ವಹಿಸಿ ವರದಿಯನ್ನು ನೀಡಿದ್ದು, ಸದರಿ ವರದಿಯಲ್ಲಿ ಗ್ರಾಮ ಪಂಚಾಯಿತಿಯವರು ಕಟ್ಟಡ ಪರವಾನಗೆಯನ್ನು ಚರ್ಚಿನ ಧರ್ಮಗುರುಗಳಿಗೆ ನೀಡಿದ್ದು, ಸದರಿ ಕಟ್ಟಡ ನಿರ್ಮಾಣಗಳಳುವ ಸ್ಥಳವು ಪರಿವರ್ತಿತ ಸ್ಥಳವಾಗಿರುವುದಿಲ್ಲ. ಇದಲ್ಲದೇ, ಸದರಿ ಜಾಗದಲ್ಲಿ ಕಟ್ಟಿರುವ ಕಟ್ಟಡವು ಕಟ್ಟಡ ಪರವಾನಗೆಯ ನಿಬಂಧನೆಗಳಿಗೆ ವಿರುದ್ಧವಾ ಗಿರುತ್ತದೆ ಎಂದು ತಿಳಿಸಿರುತ್ತಾರೆ.

-2-

ಸದರಿ ತನಿಖಾ ವರದಿಯ ಆಧಾರದ ಮೇಲೆ ಎದುರುದಾರರುಗಳ ಪ್ರತ್ಯುತ್ತರವನ್ನು ಕರೆಯಲಾಗಿದ್ದು, ಎದುರುದಾರರು ಸೆಂಟ್ ಲಾರೆನ್ಸ್ ಚರ್ಚ್‌ನವರಿಗೆ ಕಟ್ಟಡ ನಿರ್ಮಾಣಕ್ಕಾಗಿ ಪರವಾನಗೆ ನೀಡಲಾಗಿದ್ದು, ಸದರಿ ಪರವಾನಗೆಯನ್ನು ನ್ಯಾಯಯುತವಾಗಿ ಎಲ್ಲ ನಿಯಮಗಳನ್ನು ಪಾಲಿಸಿ ನೀಡಲಾಗಿರುತ್ತದೆ. ಆದ್ದರಿಂದ, ತನ್ನ ಅವಧಿಯಲ್ಲಿ ಯಾವುದೇ ತಪ್ಪು ಎಸಗಿಲ್ಲವೆಂದು ತಿಳಿಸಿರುತ್ತಾರೆ.

ದೂರಿನಂಶಗಳನ್ನು ಎದುರುದಾರರ ಆಕ್ಷೇಪಣೆಗಳನ್ನು, ತನಿಖಾ ವರದಿಯನ್ನು ಹಾಗೂ ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಿದಲ್ಲಿ ಸೇಂಟ್ ಲಾರೆನ್ಸ್ ಚರ್ಚ್‌ನವರು ಕಟ್ಟಡವನ್ನು ಮೂಡಬೆಳ್ಳೆ ಗ್ರಾಮ ಪಂಚಾಯಿತಿಯಿಂದ ಕಟಿಂಗೇರಿ ಗ್ರಾಮದ ಸರ್ವೆ ನಂಬರ್ 170/1ಎಪಿ1 ಮತ್ತು ಬೆಳ್ಳೆ ಗ್ರಾಮದ ಸರ್ವೆ ನಂಬರ್ 200/ಬಿಪಿ1 ರಲ್ಲಿ ಕಟ್ಟಡ ರಚನೆಯನ್ನು ಅಕ್ರಮವಾಗಿ ಕಟ್ಟಿರುವುದು ಕಂಡು ಬಂದಿರುತ್ತದೆ. ಕಟ್ಟಡವು ರಸ್ತೆ ಮಾರ್ಜಿನ್‌ನಿಂದ 25.00 ಮೀ, ಒಳಗೆ ಬರುತ್ತಿರುವುದರಿಂದ, ಲೋಕೋಪಯೋಗಿ ಇಲಾಖೆಯ ನಿರಾಕ್ಷೇಪಣಾ ಪತ್ರವನ್ನು ಪಡೆಯಬೇಕಾಗಿದ್ದು, ಹಾಗೂ ಸೆಟ್ ಬ್ಯಾಕ್ ಅನ್ನು ಬಿಡಬೇಕಾಗಿದ್ದು ಹಾಗೂ ಯಾವುದೇ ಸೆಟ್‌ಬ್ಯಾಕ್ ಅನ್ನು ಬಿಡದೇ ಕಟ್ಟಡ ರಚನೆ ಮಾಡಿರುವುದು ಅಕ್ರಮವೆಂದು ಕಂಡು ಬರುತ್ತದೆ. ಈ ಬಗ್ಗೆ ತನಿಖಾಧಿಕಾರಿಯಾದ ಈ ಸಂಸ್ಥೆಯ ಉಡುಪಿಯ ಆರಕ್ಷಕ ಉಪಾಧೀಕ್ಷಕರು ತಮ್ಮ ವರದಿಯಲ್ಲಿ ಕಟ್ಟಡಗಳನ್ನು ನಿಯಮಿತ 25.00 ಮೀ, ಅಂತರದಲ್ಲಿ ರಚಿಸಬೇಕಾಗಿದ್ದು, ಸೇಂಟ್ ಲಾರೆನ್ಸ್ ಚರ್ಚಿನವರು ಪಿಡಬ್ಲ್ಯೂಡಿಯಿಂದ ನೀಡಲಾಗಿರುವ ಸರ್ಕಾರದ ಸುತ್ತೋಲೆಯ ನಿಬಂಧನೆಯನ್ನು ಪರಿಪಾಲಿಸದೇ ಅಕ್ರಮವಾಗಿ ಕಟ್ಟಡವನ್ನು ಕಟ್ಟಿರುವುದು ಸ್ಪಷ್ಟ ಪಟ್ಟಿರುತ್ತದೆ. ಈ ಸಂಬಂಧ ಬೆಳ್ಳೆ ಗ್ರಾಮದ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯಾದ ಎದುರುದಾರರು ಕರ್ತವ್ಯಲೋಪವೆಸಗಿರುವುದು ಕಂಡು ಬರುತ್ತದೆ. ಕಟ್ಟಡ ಪರವಾನಗೆಯನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ನೀಡಿದ್ದು, ಅದರಲ್ಲಿ ಕಟ್ಟಡವನ್ನು ನಿವೇಶನ ಪರಿವರ್ತನೆ ನಂತರ ಕಟ್ಟುವ ನಿಬಂಧನೆ ಮೇರೆಗೆ ಹಾಗೂ ಕಟ್ಟಡ ರಚನೆ ಕಾಲದಲ್ಲಿ ಹೆದ್ದಾರಿಯ ಮಧ್ಯದ ಬಿಂದುವಿನಿಂದ ನಿಗಧಿತ ಅಂತರವನ್ನು ಬಿಟ್ಟು ಕಟ್ಟಡವನ್ನು ಕಟ್ಟಬೇಕಾಗಿದ್ದು, ಸೆಂಟ್ ಲಾರೆನ್ಸ್ ಚರ್ಚಿನವರು ಅಕ್ರಮವಾಗಿ ಕಟ್ಟಡವನ್ನು ಕಟ್ಟಿರುತ್ತಾರೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಎದುರುದಾರರು ಕಟ್ಟಡ ರಚನೆ ಕಾಲದಲ್ಲಿ ಸ್ಥಳ ಪರಿಶೀಲನೆ ಮಾಡದೇ ಕರ್ತವ್ಯಲೋಪವೆಸಗಿರುತ್ತಾರೆ. ಸದರಿ ಕಟ್ಟಡವನ್ನು ರಸ್ತೆ ಮಧ್ಯ ಬಿಂದುವಿನಿಂದ ರಾಜ್ಯ ಹೆದ್ದಾರಿಯ ಕಾಯ್ದೆ ಅನ್ವಯ 25.00 ಮೀ, ಅಂತರದ ಒಳಗೆಯೇ ಸೇಂಟ್ ಲಾರೆನ್ಸ್ ಚರ್ಚಿನವರು ಕಟ್ಟಡವನ್ನು ರಚಿಸಿದ್ದು, ಇದರ ಬಗ್ಗೆ ಎದುರುದಾರರು ಕಟ್ಟಡ ರಚನೆಯನ್ನು ಸ್ಥಗಿತ ಗೊಳಿಸಲು ಯಾವುದೇ ಕ್ರಮ ಜರುಗಿಸದೇ ಕರ್ತವ್ಯಲೋಪವೆಸಗಿರುವುದು ಕಂಡು ಬಂದಿರುತ್ತದೆ.

ಮೇಲೆ ಚರ್ಚಿಸಿದ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1) (ii) ಮತ್ತು(iii) ರನ್ವಯ ಎದುರುದಾರರಾದ ಶ್ರೀ ರಾಮಪ್ಪ ಹಿತ್ತಲಮನಿ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, 43 ನೇ ಬೆಳ್ಳೆ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಉಡುಪಿ ಜಿಲ್ಲೆ, ಪ್ರಸ್ತುತ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಿಯಾರು ಗ್ರಾಮ ಪಂಚಾಯಿತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬಂದಿದ್ದರಿಂದ, ಇವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ , ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಶ್ರೀ ರಾಮಪ್ಪ ಹಿತ್ತಲಮನಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, 43 ನೇ ಬೆಳ್ಳೆ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ, (ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಿಯಾರು ಗ್ರಾಮ ಪಂಚಾಯಿತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ) ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(ii) ಮತ್ತು (iii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11–ಎ ರಡಿಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ನಿರ್ಣಯಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/597/ಗ್ರಾಪಂಕಾ/2017 ಬೆಂಗಳೂರು, ದಿನಾಂಕ:28–07–2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ರಾಮಪ್ಪ ಹಿತ್ತಲಮನಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, 43 ನೇ ಬೆಳ್ಳೆ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ, (ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಿಯಾರು ಗ್ರಾಮ ಪಂಚಾಯಿತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ) ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಇದರೊಂದಿಗೆ ಈ ಪ್ರಕರಣದ ಮೂಲ ದಾಖಲಾತಿಯನ್ನು ಪುಟ ಸಂಖ್ಯೆ 01 ರಿಂದ 179 ರವರೆಗೆ ಲಗತ್ತಿಸಲಾಗಿದೆ.)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ
7. ಶ್ರೀ ರಾಮಪ್ಪ ಹಿತ್ತಲಮನಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಿಯಾರು ಗ್ರಾಮ ಪಂಚಾಯಿತಿ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.